# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 854 |
| ಸದಸ್ಯರ ಹೆಸರು | : | ಶ್ರೀ ಎನ್.ಅಪ್ಪಾಜಿಗೌಡ |
| ಉತ್ತರಿಸುವ ದಿನಾಂಕ | : | 09-03-2021 |
| ಉತ್ತರಿಸುವ ಸಚಿವರು | : | ಸಹಕಾರ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಹಕಾರ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗೆ ಈ ಹಿಂದೆಯೇ ಡಿ.ಪಿ.ಎ.ಆರ್, ಡಿ.ಪಿ.ಎಲ್ ಮತ್ತು ಹಣಕಾಸು ಇಲಾಖೆಯಿಂದ ಅಭಿಪ್ರಾಯಗಳ ಸಲ್ಲಿಕೆಯಾಗಿದ್ದರೂ ಸಹ ತಿದ್ದಪಡಿ ಪ್ರಕ್ರಿಯೆಯ ವಿಳಂಬವಾಗಲು ಕಾರಣವೇನು; (ವಿವರ ನೀಡುವುದು) | ಸಹಕಾರ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಗೆ ಸಂಬಂಧಿಸಿದಂತೆ ಸಹಕಾರ ಸಂಘಗಳ ನಿಬಂಧಕರಿಂದ ಸ್ವೀಕೃತವಾಗಿರುವ ಪ್ರಸ್ತಾವನೆಗೆ ಡಿಪಿಎಆರ್, ಡಿಪಿಎ ಮತ್ತು ಆರ್ಥಿಕ ಇಲಾಖೆಗಳ ಅಭಿಪ್ರಾಯ ಪಡೆಯಲಾಗಿರುತ್ತದೆ. ಈ ತಿದ್ದುಪಡಿ ವಿಷಯದ ಬಗ್ಗೆ ಇಲಾಖೆಯ ವೃಂದ ಮತ್ತು ನೇಮಕಾತಿ ಉಪ ಸಮಿತಿಯ ಸಭೆಯಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಪರಿಷ್ಕೃತ ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಂಸದೀಯ ವ್ಯವಹಾರಗಳ ಇಲಾಖೆಯಿಂದ ಪರಿಶೋಧಿಸಲಾಗಿದ್ದು, ಪ್ರಸ್ತಾವನೆಗೆ ಸಂಬಂಧಿಸಿದಂತೆ ಕೆಲವು ಅಂಶಗಳಿಗೆ ಮತ್ತೆ ಆರ್ಥಿಕ ಇಲಾಖೆಯಿಂದ ಅಭಿಪ್ರಾಯ ಪಡೆಯಲಾಗುತ್ತಿದೆ.<br>ಆರ್ಥಿಕ ಇಲಾಖೆಯಿಂದ ಅಭಿಪ್ರಾಯ ಪಡೆದ ನಂತರ ವೃಂದ ಮತ್ತು ನೇಮಕಾತಿ ಸಮಿತಿಯ ಮುಂದೆ ಮಂಡಿಸಿ ಸಮಿತಿಯ ಒಪ್ಪಿಗೆಯ ನಂತರ ಸಚಿವ ಸಂಪುಟದ ಅನುಮೋದನೆಯನ್ನು ಪಡೆದು ಕರಡು ನಿಯಮಗಳನ್ನು ಪ್ರಕಟಿಸಲಾಗುವುದು. ನಿಗದಿತ ಕಾಲಾವಧಿಯಲ್ಲಿ ಸ್ವೀಕೃತವಾಗುವ ಆಕ್ಷೇಪಣೆ / ಸಲಹೆಗಳನ್ನು ಪರಿಶೀಲಿಸಿದ ನಂತರ ಅಂತಿಮ ನಿಯಮಗಳನ್ನು ಹೊರಡಿಸಲು ಕ್ರಮವಹಿಸಲಾಗುವುದು |
| ಆ) | ಜೇಷ್ಠತೆಯಲ್ಲಿ ಹಿರಿಯರಾಗಿರುವ ಸಿ.ಡಿ.ಓ ಗಳನ್ನು ಕೈಬಿಟ್ಟು ಕಿರಿಯರಾಗಿವವರಿಗೆ ನಿಬಂಧಕರ ಹುದ್ದೆಗೆ ಮುಂಬಡ್ತಿ ನೀಡಿದ್ದು ಸಹಕಾರ ಸಂಘಗಳ ನಿಬಂಧಕರು ಬೆಂಗಳೂರು ರವರು ಪದೋನ್ನತಿ ನೀಡಿರುವ ಆದೇಶವನ್ನು ರದ್ದುಪಡಿಸಲು ಸರ್ಕಾರ ಕ್ರಮ ಕೈಗೊಂಡಿದಿರಲು ಕಾರಣವೇನು; (ವಿವರ ನೀಡುವುದು) | ಜೇಷ್ಠತೆಯಲ್ಲಿ ಹಿರಿಯ ಸಿ.ಡಿ.ಓ.ಗಳನ್ನು ಕೈಬಿಟ್ಟು ಕಿರಿಯವರಾಗಿರುವವರಿಗೆ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಹುದ್ದೆಗೆ ಸ್ಥಾನಪನ್ನ ಮುಂಬಡ್ತಿ ನೀಡಿರುವುದಿಲ್ಲ.<br>ಆದರೆ, ಆಡಳಿತಾತ್ಮಕ ಹಿತದೃಷ್ಟಿಯಿಂದ ಸಹಕಾರ ಅಭಿವೃದ್ಧಿ ಅಧಿಕಾರಿಗಳನ್ನು ಕೆ.ಸಿ.ಎಸ್.ಆರ್ ನಿಯಮ-32 ರಡಿ ಸಹಕಾರ ಸಂಘಗಳ ಸಹಾಯಕ ನಿಬಂಧಕರ ಹುದ್ದೆಗೆ ಸ್ವತಂತ್ರ ಪ್ರಭಾರದಲ್ಲಿರಿಸಲಾಗಿದೆ. ಇದು ಮುಂಬಡ್ತಿಯಾಗಿರುವುದಿಲ್ಲ ಬದಲಿಗೆ ತಾತ್ಕಾಲಿಕ ವ್ಯವಸ್ಥೆಯಾಗಿರುತ್ತದೆ. |
| ಇ) | ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು 33 ವರ್ಷ ಕಳೆದರೂ ಸಹ ತಿದ್ದುಪಡಿ ಮಾಡಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ತಿದ್ದುಪಡಿಯನ್ನು ಯಾವ ಕಾಲಾಮಿತಿಯೊಳಗೆ ಪೂರ್ಣಗೊಳಿಸಲಾಗುವುದು; (ವಿವರ ನೀಡುವುದು) | ಬಂದಿದೆ.<br>ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯ ಆದೇಶದನ್ವಯ ಸಹಕಾರ ಸಂಘಗಳ ನಿಬಂಧಕರಿಂದ ಸ್ವೀಕೃತವಾಗಿರುವ ವೃಂದ ಮತ್ತು ನೇಮಕಾತಿ ನಿಯಮಗಳ ತಿದ್ದುಪಡಿಯ ಪ್ರಸ್ತಾವನೆಯನ್ನು **ಉಪ ಪ್ರಶ್ನೆ "ಅ"** ರಲ್ಲಿ ವಿವರಿಸಿರುವಂತೆ ಕ್ರಮವಹಿಸಲಾಗುತ್ತಿದೆ. |
| ಈ) | ದಿನಾಂಕ:17-08-2017 ರ ಕೆ.ಎ.ಟಿ ಬೆಂಗಳೂರು ಆದೇಶದಂತೇ ಪದೋನ್ನತಿಯಿಂದ ವಂಚಿತರಾಗಿವವರಿಗೆ ಪದೋನ್ನತಿ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು; (ವಿವರ ನೀಡುವುದು), ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು? | ವೃಂದ ಮತ್ತು ನೇಮಕಾತಿಯ ನಿಯಮಗಳನ್ನು ಅಂತಿಮಗೊಳಿಸಿ ಪ್ರಕಟಿಸಿದ ನಂತರ ಅರ್ಹರಿರುವ ಅಧಿಕಾರಿ / ನೌಕರರಿಗೆ ಪದೋನ್ನತಿ ನೀಡಲು ಕ್ರಮ ವಹಿಸಲಾಗುವುದು. |

ಸಂಖ್ಯೆ: ಸಿಒ 50 ಇಸಿಎ 2021

(ಎಸ್.ಟಿ.ಸೋಮಶೇಖರ್)
ಸಹಕಾರ ಸಚಿವರು